**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.96/2025**

| | | | |
|---|---|---|---|
| ಸಾಕ್ಷಿದಾರರ ಹೆಸರು | ಸಕೀನಾಬಿ ಆಲೂರ | ಸಿಡಬ್ಲ್ಯೂ | 5 |
| ಗಂಡನ ಹೆಸರು | ಸುಲೇಮಾನ | ಪಿಡಬ್ಲ್ಯೂ | 3 |
| ವಯಸ್ಸು | 51 ವರ್ಷ | | |
| ಉದ್ಯೋಗ | ಗೃಹಿಣಿ | | |
| ವಾಸಸ್ಥಳ | ಬೆಳಗಾಲಪೇಟ | | |

**ದಿಃ 17.07.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1). ಚಾ.ಸಾ–1,4 ಮತ್ತು 6 ನನ್ನ ಮಕ್ಕಳು, ಚಾ.ಸಾ–2,3,7 ರಿಂದ 10 ಮತ್ತು ಆರೋಪಿಗಳ ಪರಿಚಯ ಇರುತ್ತದೆ. ಈ ಪ್ರಕರಣಕ್ಕೆ ಸಂಬಂದಸಿದಂತೆ ನನಗೆ ಯಾವುದೇ ಮಾಹಿತಿ ಇರುವದಿಲ್ಲ. ಆರೋಪಿಗಳು ನನಗಾಗಲೀ, ಚಾ.ಸಾ–1,4,6 ಮತ್ತು 7 ರವರಿಗಾಗಲೀ ಯಾವುದೇ ವಸ್ತುವಿನಿಂದ ಹಲ್ಲೆ ಮಾಡಿ ಜೀವ ಬೆದರಿಕೆ ಹಾಕಿರುವದಿಲ್ಲ ಮತ್ತು ಅವಾಚ್ಯ ಶಬ್ದಗಳಿಂದ ಬೈದಿರುವದಿಲ್ಲ. ಈ ಸಂಬಂದವಾಗಿ ಚಾ.ಸಾ–1 ಮತ್ತು 4 ಯಾವುದೇ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರುವದಿಲ್ಲ ಮತ್ತು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ದಿನಾಂಕಃ 01.12.2024 ರಂದು ಪೊಲೀಸರ ಮುಂದೆ ನೀಡಿದ ಹೇಳಿಕೆಯನ್ನು ಸಾಕ್ಷಿಗೆ ಓದಿ ಹೇಳಿ ಕೇಳಲಾಗಿ ಅದರಲ್ಲಿ ಬರೆದಿರುವಂತೆ ಆರೋಪಿಗಳು ನನ್ನ ಮೇಲೆ ಮತ್ತು ಚಾ.ಸಾ–4 ರವರ ಮೇಲೆ ಯಾವುದೇ

ಕೃತ್ಯವನ್ನು ಎಸಗಿರುವದಿಲ್ಲ. ಹಲ್ಲೆಯ ಹಿನ್ನೆಲೆಯಲ್ಲಿ ಚಾ.ಸಾ-1 ಮತ್ತು 4 ಹಾವೇರಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡು ಮತ್ತು ನಂತರ ಹೆಚ್ಚಿನ ಚಿಕಿತ್ಸೆಯನ್ನು ಹುಬ್ಬಳ್ಳಿಯ ಕಿಮ್ಸು ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ಪಡೆದುಕೊಂಡಿದ್ದಾರೆ ಅಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿ.ಪಿ-5 ಎಂದು ಗುರುತಿಸಲಾಯಿತು. ನಿ.ಪಿ-1 ರಂತೆ ದೂರು ನೀಡಿದ ನಂತರ ಆರೋಪಿಗಳು ನಮ್ಮ ಸಂಬಂಧಿಕರಾದ ಕಾರಣ ಹಿರಿಯರ ಸಲಹೆಯಂತೆ ರಾಜಿ ಮಾಡಿಕೊಂಡಿದ್ದೇನೆ ಅಂದರೆ ಸರಿ. ಆದ ಕಾರಣ ನನಗೆ ನಿ.ಪಿ-5 ದಾಖಲಾತಿಗಳ ಸಂಪೂರ್ಣ ಮಾಹಿತಿ ಇದ್ದರೂ ಆರೋಪಿಗಳನ್ನು ಈ ಪ್ರಕರಣದಿಂದ ಬಿಡುಗಡೆ ಮಾಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.